ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಡಿಟಿಇ/01/ಸಿಡಿಸಿ (1)/2023

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001,
ದಿನಾಂಕ:28/11/2023.

# ಅಭಿನಂದನಾ ಪತ್ರ

ರಾಷ್ಟ್ರೀಯ ಮಾನ್ಯತಾ ಮಂಡಳಿ (NBA) ನವದೆಹಲಿ ಇವರು ಪ್ರಚುರ ಪಡಿಸಿರುವ 2019ರ ಫಲಿತಾಂಶ ಆಧಾರಿತ ಪಠ್ಯಕ್ರಮದನ್ವಯ ರಾಜ್ಯದಲ್ಲಿ ಪ್ರಥಮ ಬಾರಿಗೆ ಸರ್ಕಾರಿ ಸಂಸ್ಥೆಯಾದ, ಸರ್ಕಾರಿ ಪಾಲಿಟೆಕ್ನಿಕ್ ಬಳ್ಳಾರಿ ಸಂಸ್ಥೆಯ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗವು 2023-24 ರಿಂದ 2025-26 ಸಾಲಿನ ವರೆಗೆ ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ ಮಾನ್ಯತೆ ಪಡೆದಿರುವುದು ಅತ್ಯಂತ ಶ್ಲಾಘನೀಯ ಮತ್ತು ಸಂತಸದ ವಿಷಯವಾಗಿದೆ.

ರಾಷ್ಟ್ರೀಯ ಮಾನ್ಯತಾ ಮಂಡಳಿಯ ಮಾನ್ಯತೆ ಪಡೆಯುವಲ್ಲಿ ಶ್ರಮಿಸಿರುವ ಸಂಸ್ಥೆಯ ಪ್ರಾಂಶುಪಾಲರಿಗೆ, ವಿಭಾಗಾಧಿಕಾರಿಗಳಿಗೆ, NBA ಸಂಯೋಜಕರಿಗೆ, ಉಪನ್ಯಾಸಕರುಗಳಿಗೆ, ಕಚೇರಿ ಸಿಬ್ಬಂದಿಯವರಿಗೆ, ಬೋಧಕ / ಬೋಧಕೇತರ ಸಿಬ್ಬಂದಿ ವರ್ಗದವರಿಗೆ, ವಿದ್ಯಾರ್ಥಿಗಳಿಗೆ, ಪೋಷಕರಿಗೆ ಮತ್ತು ಹಳೆ ವಿದ್ಯಾರ್ಥಿಗಳಿಗೆ ಅಭಿನಂದನೆಗಳು.

**ಸರ್ಕಾರಿ ಪಾಲಿಟೆಕ್ನಿಕ್ ಬಳ್ಳಾರಿ ಸಂಸ್ಥೆಯು ರಾಜ್ಯದ ಮಾದರಿ ಸಂಸ್ಥೆಯಾಗಲೆಂದು ಹಾರೈಸುತ್ತೇನೆ.**

ಜಂಟಿ ನಿರ್ದೇಶಕರು (ಸಿಡಿಸಿ)

ಇವರಿಗೆ: ಪ್ರಾಂಶುಪಾಲರು ಮತ್ತು ಎಲ್ಲಾ ಸಂಬಂಧಪಟ್ಟವರು.
ಸರ್ಕಾರಿ ಪಾಲಿಟೆಕ್ನಿಕ್ ಬಳ್ಳಾರಿ